**ಕರ್ನಾಟಕ ಸರ್ಕಾರದ ನಡವಳಿಗಳು.**

**ವಿಷಯ:** ಶ್ರೀ ಲಿಂಗರಾಜು, ಸದಸ್ಯರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಯಚೂರು ಜಿಲ್ಲಾ ಪಂಚಾಯತಿ ಇವರ ಪತ್ರ ಸಂಖ್ಯೆ:ಜಿಪರಾ/ಪರಿಷತ್/ಎಲ್.ಕೆ.ದೊಡ್ಡಿ/2017-18 ದಿನಾಂಕ:05-06-2017.
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್, ದಿನಾಂಕ 17.07.2017
3) ಶ್ರೀ ಲಿಂಗರಾಜು, ಸದಸ್ಯರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರ ಲಿಖಿತ ಹೇಳಿಕೆ, ದಿನಾಂಕ 26.07.2017
4) ಶ್ರೀಮತಿ ಪಾರ್ವತಿ ಉಪಾಧ್ಯಕ್ಷರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರ ಲಿಖಿತ ಹೇಳಿಕೆ, ದಿನಾಂಕ 26.07.2017
5) ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ 08.08.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ರಾಯಚೂರು ತಾಲ್ಲೂಕು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರಾದ ಶ್ರೀ ಸದಾನಂದ ಅರ್ನಾಡ ಇವರು ಕಾರ್ಯನಿರ್ವಹಿಸುತ್ತಿರುವಾಗ ದಿನಾಂಕ: 10.03.2017 ರಂದು ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯಿತಿ ಸದಸ್ಯರಾದ ಶ್ರೀ ಲಿಂಗರಾಜು ಹಾಗೂ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಶ್ರೀಮತಿ ಪಾರ್ವತಿ ರವರ ಪತಿ ಶ್ರೀ ಮೌಲಪ್ಪ ರವರು ಇವರ ಮೇಲೆ ದೈಹಿಕ ಹಲ್ಲೆ ನಡೆಸಿದ್ದು, ಸ್ಥಳದಲ್ಲಿ ಹಾಜರಿದ್ದ ಗ್ರಾಮ ಪಂಚಾಯತ್ ಸದಸ್ಯರಾದ ಶ್ರೀ ವೀರೇಶ ರವರು ಸಾಕ್ಷಿಯಾಗಿರುತ್ತಾರೆ. ಈ ಬಗ್ಗೆ ಪಶ್ಚಮ ಪೋಲೀಸ್ ಠಾಣೆ ರಾಯಚೂರಿನಲ್ಲಿ ಆರೋಪಿತರ ವಿರುದ್ಧ ದೂರು ದಾಖಲಾಗಿರುತ್ತದೆ. ಈ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿ, ರಾಯಚೂರು ತಾಲ್ಲೂಕು ರವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಯಚೂರು ಜಿಲ್ಲಾ ಪಂಚಾಯತಿ ಇವರಿಗೆ ವರದಿ ನೀಡಿರುತ್ತಾರೆ. ಶ್ರೀ ಮೌಲಪ್ಪ ರವರ ಪತ್ನಿ ಶ್ರೀಮತಿ ಪಾರ್ವತಿ ಗ್ರಾಮ ಪಂಚಾಯತಿ ಉಪಾಧ್ಯಕ್ಷರು ಎನ್ನುವ ಕಾರಣಕ್ಕೆ ಅವರು ಗ್ರಾಮ ಪಂಚಾಯತಿಯ ಪ್ರತಿಯೊಂದು ಕೆಲಸದಲ್ಲಿ ಹಸ್ತಕ್ಷೇಪ ಮಾಡುತ್ತಿರುವ ಬಗ್ಗೆ ಹಾಗೂ ಸಭೆಯಲ್ಲಿ ಭಾಗವಹಿಸಿ ಪಿ.ಡಿ.ಓ.ರವರ ಮೇಲೆ ದಬ್ಬಾಳಿಕೆ ನಡೆಸುತ್ತಿರುವ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು ಜಿಲ್ಲೆ, ವರದಿಯಲ್ಲಿ ತಿಳಿಸಿರುತ್ತಾರೆ. ಈ ಕಾರಣಗಳಿಂದ ಶ್ರೀ ಲಿಂಗರಾಜು, ಸದಸ್ಯರು, ಹಾಗೂ ಶ್ರೀಮತಿ ಪಾರ್ವತಿ ಉಪಾಧ್ಯಕ್ಷರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರ ಸದಸ್ಯತ್ವವನ್ನು ರದ್ದುಗೊಳಿಸುವ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಯಚೂರು ಜಿಲ್ಲಾ ಪಂಚಾಯತಿ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ರನ್ವಯ ಗ್ರಾಮ ಪಂಚಾಯತಿ ಸದಸ್ಯ ಸ್ಥಾನದಿಂದ ಏಕೆ ವಜಾ ಮಾಡಬಾರದು ಎಂಬುದರ ಬಗ್ಗೆ 15 ದಿನಗಳೊಳಗಾಗಿ ವಿವರಣೆ ನೀಡುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಸದರಿಯವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಶ್ರೀ ಲಿಂಗರಾಜು, ಸದಸ್ಯರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರು ಸರ್ಕಾರದಿಂದ ನೀಡಲಾದ ಕಾರಣ ಕೇಳಿ ನೋಟೀಸಿಗೆ ಕೆಳಗಿನಂತೆ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

"ಸದಾನಂದ ಆರ್ನಾಡ್ ಪಿ.ಡಿ.ಓ ರವರು ಸಮಯಕ್ಕೆ ಸರಿಯಾಗಿ ಕಾರ್ಯಾಲಯದ ಕೆಲಸಗಳನ್ನು ನಿರ್ವಹಿಸದೇ ನಿರ್ಲಕ್ಷ್ಯ ಮಾಡುತ್ತಿದ್ದು, ಕುಡಿಯುವ ನೀರಿನ ಪಂಪುಗಳ ದುರಸ್ತಿ ಮಾಡಿದವರಿಗೆ ಹಣ ಪಾವತಿ ಮಾಡಿರುವುದಿಲ್ಲ. ಪಂಚಾಯತಿಗೆ ಬಾರದೇ ಫೋನ್ ಸ್ವಿಚ್ ಆಫ್ ಮಾಡುವುದು, ಸಾಮಾನ್ಯ ಸಭೆ ಕರೆಯದೇ ಇರುವುದು ಇವೆಲ್ಲಾ ಕಾರಣಗಳಿಂದ ನನ್ನ ಮತ್ತು ಪಿಡಿಓ ರವರ ಮಾತಿನ ಚರ್ಚೆಯಾಗಿದೆ ಹೊರತು ಯಾವುದೇ ರೀತಿಯಿಂದ ಹಲ್ಲೆ ಪ್ರಕರಣಗಳು ನಡೆದಿರುವುದಿಲ್ಲ" ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ (4) ರಲ್ಲಿ ಶ್ರೀಮತಿ ಪಾರ್ವತಿ ಉಪಾಧ್ಯಕ್ಷರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲ ಇವರು ಸರ್ಕಾರದಿಂದ ನೀಡಲಾದ ಕಾರಣ ಕೇಳಿ ನೋಟೀಸಿಗೆ ಕೆಳಗಿನಂತೆ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

"ಸದಾನಂದ ಆರ್ನಾಡ್ ಪಿ.ಡಿ.ಓ ರವರು ಸಮಯಕ್ಕೆ ಸರಿಯಾಗಿ ಕಾರ್ಯಾಲಯದ ಕೆಲಸಗಳನ್ನು ನಿರ್ವಹಿಸದೇ ನಿರ್ಲಕ್ಷ್ಯ ಮಾಡುತ್ತಿದ್ದು, ಪಂಚಾಯತಿಗೆ ಬಾರದೇ ಫೋನ್ ಸ್ವಿಚ್ ಆಫ್ ಮಾಡುವುದು. ಸಾಮಾನ್ಯ ಸಭೆ ಕರೆಯದೇ ಇರುವುದು. ಇವೆಲ್ಲಾ ಕಾರಣಗಳಿಂದ ನನ್ನ ಪತಿ ಮತ್ತು ಪಿಡಿಓ ರವರ ಮಾತಿನ ಚರ್ಚೆಯಾಗಿದೆ ಹೊರತು ಯಾವುದೇ ರೀತಿಯಿಂದ ಹಲ್ಲೆ ಪ್ರಕರಣಗಳು ನಡೆದಿರುವುದಿಲ್ಲ"ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ (5) ರನ್ವಯ ಶ್ರೀ ಲಿಂಗರಾಜು, ಸದಸ್ಯರು, ಹಾಗೂ ಶ್ರೀಮತಿ ಪಾರ್ವತಿ ಉಪಾಧ್ಯಕ್ಷರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರುಗಳನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿನಾಂಕ 19.08.2017 ರಂದು ಜರುಗಿದ ವಿಚಾರಣೆಯಲ್ಲಿ ಆಪಾದಿತ ಸದಸ್ಯರಾದ ಶ್ರೀ ಲಿಂಗರಾಜು, ಕಾರ್ಯನಿರ್ವಾಹಕ ಅಧಿಕಾರಿ, ರಾಯಚೂರು ತಾಲ್ಲೂಕು ಹಾಜರಿದ್ದರು. ವಿಚಾರಣಾ ಸಂದರ್ಭದಲ್ಲಿ ಎಫ್.ಐ.ಆರ್. ದಾಖಲಿಸಿರುವ ಪ್ರತಿ ಹಾಜರುಪಡಿಸಿರುತ್ತಾರೆ. ಹಾಜರಿದ್ದ ಅಧಿಕಾರಿಗಳು ಹಲ್ಲೆ ನಡೆಸಿರುವುದರ ಬಗ್ಗೆ ಹೇಳಿಕೆ ನೀಡಿರುತ್ತಾರೆ.

ಸರ್ಕಾರವು ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಲಿಖಿತ ಹೇಳಿಕೆಗಳು ಹಾಗೂ ಆಪಾದಿತ ಸದಸ್ಯರ ಹೇಳಿಕೆಗಳನ್ನು ಪರಿಶೀಲಿಸಿ, ಆಪಾದಿತ ಸದಸ್ಯರು ಕರ್ತವ್ಯ ನಿರತ ಸರ್ಕಾರಿ ನೌಕರರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರ ಮೇಲೆ ದೈಹಿಕ ಹಲ್ಲೆ ನಡೆಸಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಶ್ರೀ ಲಿಂಗರಾಜು, ಸದಸ್ಯರು, ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ಕ್ರಮವಹಿಸಿ, ಸದರಿಯವರನ್ನು ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿಯ ಸದಸ್ಯ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಹಾಗೂ ಶ್ರೀಮತಿ ಪಾರ್ವತಿ ಗ್ರಾಮ ಪಂಚಾಯತಿ ಉಪಾಧ್ಯಕ್ಷರ ಪತಿಯಾದ ಶ್ರೀ ಮೌಲಪ್ಪ ರವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿ, ರಾಯಚೂರು ತಾಲ್ಲೂಕು ಇವರಿಗೆ ತಿಳಿಸಲಾಗಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 557 ಗ್ರಾಪಂಕಾ 2017 ಬೆಂಗಳೂರು, ದಿನಾಂಕ:16.10.2017</u>**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಲಿಂಗರಾಜು, ಸದಸ್ಯರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರು ಕರ್ತವ್ಯ ನಿರತ ಸರ್ಕಾರಿ ನೌಕರರಾದ ಶ್ರೀ ಸದಾನಂದ ಆರ್ನಾಡ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ ಇವರ ಮೇಲೆ ದೈಹಿಕ ಹಲ್ಲೆ ನಡೆಸಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಶ್ರೀ ಲಿಂಗರಾಜು, ಸದಸ್ಯರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರನ್ನು ರಾಯಚೂರು ಜಿಲ್ಲೆ, ರಾಯಚೂರು ತಾಲ್ಲೂಕಿನ ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17/x/17

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ:</u>

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ರಾಯಚೂರು ಜಿಲ್ಲಾ ಪಂಚಾಯತಿ.
2) ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ರಾಯಚೂರು ತಾಲ್ಲೂಕು ಪಂಚಾಯತಿ, ರಾಯಚೂರು ಜಿಲ್ಲೆ
4) ಶ್ರೀ ಲಿಂಗರಾಜು ಸದಸ್ಯರು, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಎಲ್.ಕೆ.ದೊಡ್ಡಿ ಗ್ರಾಮ ಪಂಚಾಯತಿ, ರಾಯಚೂರು ತಾಲ್ಲೂಕು, ರಾಯಚೂರು ಜಿಲ್ಲೆ.
6) ಗಣಕ ಶಾಖೆ/ ಕರ್ನಾಟಕ ವಿಕಾಸ
7) ಕಛೇರಿ ಪ್ರತಿ / ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.